**ದಿನಾಂಕ: 19.12.2020 ರಂದು ಸಮಯ 11.00 ಗಂಟೆಗೆ ವಾರ್ಡ್ 154-ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿದ್ದೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## ಹಾಜರಿದ್ದವರು

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಆನಂದ.ಜಿ, ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀಮತಿ. ಜ್ಯೋತಿ, ಪಿ.ಎಸ್.ಐ, ಬಸವನಗುಡಿ ಪೋಲೀಸ್ ಠಾಣೆ
5. ಶ್ರೀ. ಕಿರಣ್ ಕುಮಾರ್, Water Inspector, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್-154
6. ಶ್ರೀ. ನಾಗರಾಜು, ಎ.ಎಸ್.ಐ ಬಸವನಗುಡಿ ಸಂಚಾರಿ ಠಾಣೆ
7. ಶ್ರೀ. ಕೃಷ್ಣಮೂರ್ತಿ.ಎಂ, ಕಿರಿಯ ಅಭಿಯಂತರರು, BESCOM ವಾರ್ಡ್ 154
8. ಡಾ॥ ಪೂಜಾ, ವೈದ್ಯಾಧಿಕಾರಿ, ವಾರ್ಡ್ 154
9. ಡಾ॥ ಪ್ರಕೃತಿ, ವೈದ್ಯಾಧಿಕಾರಿ, ವಾಡ್ ೯ 154
9. ಶ್ರೀ. ಕುಬೇಂದ್ರ, ಕಂದಾಯ ವಸೂಲಿಗಾರರು ವಾರ್ಡ್ 154
10. ಶ್ರೀಮತಿ. ಸುಮಂಗಳ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸಿರುವ ಮೇರೆಗೆ ದಿನಾಂಕ: 19.12.2020 ರಂದು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

1) ನೋಡಲ್ ಅಧಿಕಾರಿಗಳು ಮಾತನಾಡಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ. 10096/2020 (ಜಿಐಎಮ್-ಪಿಐಎಲ್) ರ ನಿರ್ದೇಶನದಲ್ಲಿ ತಿಳಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ Begging and Hawking children identification survey ಕೈಗೊಳ್ಳಬೇಕಾಗಿರುವುದರಿಂದ ವಾರ್ಡ್‌ಗಳಲ್ಲಿ ಬರುವ ಟ್ರಾಫಿಕ್ ಸಿಗ್ನಲ್‌ಗಳಲ್ಲಿ, ಕೊಳಗೇರಿ, ಬಸ್ ನಿಲ್ದಾಣ ಹಾಗೂ ಇತರೇ ಸ್ಥಳಗಳಲ್ಲಿ ಸ್ಥಳೀಯ ನಿವಾಸಿ ಕಲ್ಯಾಣ ಸಂಘ ಹಾಗೂ ಸ್ವಯಂ ಸೇವಾ ಸಂಘಗಳ ಸಹಾಯದಿಂದ ಗುರುತಿಸಿ ಮಾಹಿತಿ ಕಲೆ ಹಾಕಲು ವರದಿ ನೀಡಲು ತಿಳಿಸಿರುತ್ತಾರೆ.

**ಕ್ರಮ: - ಕಿರಿಯ ಅಭಿಯಂತರರು, ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-154 ರವರಿಗೆ ವರದಿ ನೀಡಲು ಕೋರಲಾಗಿರುತ್ತದೆ.**

2) ನೋಡಲ್ ಅಧಿಕಾರಿಗಳು ಮಾತನಾಡಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ. 15768/2013 ರ ಹಿನ್ನಲೆಯಲ್ಲಿ ಹೊರಡಿಸಲಾದ ಸರ್ಕಾರದ ಆದೇಶದಲ್ಲಿ 2020-21ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ, ಶಾಲೆಗೆ ಹಾಜರಾಗಲು ನಗರ ಸ್ಥಳೀಯ ಸಂಸ್ಥೆಗಳು (ಬಿ.ಬಿ.ಎಂ.ಪಿ ಒಳಗೊಂಡಂತೆ) ವಾರ್ಡ್ ಕಮಿಟಿಯನ್ನು ರಚಿಸಲು ಸೂಚಿಸಿರುವ ಹಿನ್ನಲೆಯಲ್ಲಿ ಆ ವಾರ್ಡ್ ವ್ಯಾಪ್ತಿಯ ಮುಖ್ಯೋಪಾಧ್ಯಾಯರು, ಅಗಂನವಾಡಿ ಕಾರ್ಯಕರ್ತೆಯರು, ಎನ್.ಜಿ.ಓ ಗಳನ್ನು ಸದಸ್ಯರುಗಳನ್ನಾಗಿ ಮಾಡಿ ಶಾಲೆಯಿಂದ ವಂಚಿತರಾದ ಮಕ್ಕಳನ್ನು ಗುರುತಿಸಿ ವರದಿ ನೀಡಬೇಕಾಗಿರುವ ಹಿನ್ನಲೆಯುಲ್ಲಿ ವಾರ್ಡ್ ಕಮಿಟಿ ರಚಿಸಲು ಸಂಬಂಧಪಟ್ಟವರ ಹೆಸರುಗಳನ್ನು ನೀಡಲು ಕೋರಿರುತ್ತಾರೆಂದು ಈ ಮೂಲಕ ತಿಳಸಲಾಗಿದೆ.

**ಕ್ರಮ: - ಕಲ್ಯಾಣ ಅಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎನ್.ಆರ್.ಕಾಲೋನಿ ಮತ್ತು ಮುಖ್ಯೋಪಾಧ್ಯಾಯರು, ಬಿ.ಬಿ.ಎಂ.ಪಿ ಪ್ರೌಢಶಾಲೆ, ವಾರ್ಡ್-154 ರವರಿಗೆ ವರದಿ ನೀಡಲು ಕೋರಲಾಗಿರುತ್ತದೆ.**

3) ಬಿಡಬ್ಲ್ಯೂಎಸ್‌ಎಸ್‌ಬಿ, ವಾರ್ಡ್-154 ರ ಸಹಾಯಕ ಅಭಿಯಂತರರು ಮಾತನಾಡಿ ಈ ಹಿಂದೆ ಸಭೆಯಲ್ಲಿ ಸೂಚಿಸಿರುವಂತೆ ಜಲಮಂಡಳಿ ವತಿಯಿಂದ ಹೊಸದಾಗಿ ಒಳಚರಂಡಿ ಪೈಪ್‌ಗಳನ್ನು ಅಳವಡಿಸಲು ಎನ್.ಆರ್. ಕಾಲೋನಿ 2ನೇ, 4ನೇ, 5ನೇ ಮತ್ತು 9ನೇ ಮುಖ್ಯರಸ್ತೆ ಅಗೆದಿರುವ ರಸ್ತೆಯ ಭಾಗಕ್ಕೆ ಡಾಂಬರೀಕರಣ ಮಾಡಲಾಗಿರುತ್ತದೆ ಹಾಗೂ ಡಿ.ವಿ.ಜಿ ರಸ್ತೆಯನ್ನು ಬರುವ ಸಭೆಯೊಳಗೆ ಸದರಿ ರಸ್ತೆಯನ್ನು ಸಹ ಡಾಂಬರೀಕರಣ ಮಾಡಿ ಕಾಮಗಾರಿಯನ್ನು ಶೀಘ್ರವಾಗಿ ಮುಕ್ತಾಯಗೊಳಿಸುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

>>>>2

Scanned with CamScanner

4) ಬಸವನಗುಡಿ ಸಂಚಾರಿ ಠಾಣೆಯ ಎ.ಎಸ್.ಐ ರವರು ಮಾತನಾಡಿ ಟ್ರಾಫಿಕ್‌ಗೆ ಸಂಬಂಧಿಸಿದಂತೆ Sign board ಗಳನ್ನು ಅಳವಡಿಸಬೇಕಾಗಿರುವುದರಿಂದ ಬಿ.ಬಿ.ಎಂ.ಪಿ ವತಿಯಿಂದ Sign board ಗಳನ್ನು ನೀಡುವಂತೆ ಕೋರಿರುತ್ತಾರೆ.

**ಕ್ರಮ:- ಕಿರಿಯ ಅಭಿಯಂತರರು, ವಾರ್ಡ್ 154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ**

5) ನೋಡಲ್ ಅಧಿಕಾರಿಗಳು ಮಾತನಾಡಿ ಕಸ ಸಂಗ್ರಹಿಸುವ ವಿಷಯವಾಗಿ ಸಾರ್ವಜನಿಕರಿಂದ ಹಲವಾರು ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ ಹಸಿ ತ್ಯಾಜ್ಯ ಸಂಗ್ರಹಿಸಲು ಹೆಚ್ಚುವರಿ ಕಾಂಪ್ಯಾಕ್ಟರ್ ನೀಡಲು ಅವಕಾಶವಿದ್ದರೆ ಇದರ ಬಗ್ಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

**ಕ್ರಮ: - ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

6) ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿರುವ ಬರುವ ರಸ್ತೆ ಗುಂಡಿಗಳನ್ನು ಶೀಘ್ರವಾಗಿ ಮುಚ್ಚಲು ಕ್ರಮ ಕೈಗೊಳ್ಳುವುದು ಹಾಗೂ 14ನೇ ಹಣಕಾಸಿನ ಅನುದಾನದಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಶೀಘ್ರವಾಗಿ ಸಲ್ಲಿಸಿ ಕೆಲಸ ಪ್ರಾರಂಭಿಸಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

**ಕ್ರಮ:- ಕಿರಿಯ ಅಭಿಯಂತರರು, ವಾರ್ಡ್ 154**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

22/12

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ 154-ಬಸವನಗುಡಿ

22/12

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿದ್ಯುತ್) ಅವಲಹಳ್ಳಿ ಉಪ ವಿಭಾಗ ರವರ ಅವಗಾಹನೆಗೆ.
8) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
9) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
10) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
11) ಕಛೇರಿ ಕಡತಕ್ಕೆ.

Scanned with CamScanner